ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: DCE/BUD/GCC/4/2023

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಬೆಂಗಳೂರು ದಿನಾಂಕ:16.06.2023.

**ಇವರಿಗೆ:**

**ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಡಿಡಿಓಗಳಿಗೆ**

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ನೀಡುವ ಸಂಬಂಧ ಮಾಹಿತಿಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ:99:ಸೇವನೆ:2022 ದಿ:24.01.2023

*****

ಪ್ರಸ್ತಾಪಿತ ವಿಷಯ ಮತ್ತು ಉಲ್ಲೇಖಿತ ಸರ್ಕಾರದ ಪತ್ರದಲ್ಲಿನ ಆದೇಶದಂತೆ, ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಜಾರಿಗೆ ಬಂದ ದಿನಾಂಕ:22.03.2012 ರಂದು ಸೇವೆಯಲ್ಲಿದ್ದು, ದಿನಾಂಕ:17.04.2021ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾದವರ ಅರ್ಹ ಸೇವಾನಿರತ ಸರ್ಕಾರಿ ನೌಕರರ ಪರೀಕ್ಷಾ ಡಿಜಿಟಲ್ ಸಹಿ ಹೊಂದಿರುವ ಪ್ರಮಾಣ ಪತ್ರವನ್ನು ಪರಿಶೀಲಿಸಿ(Validate CLT Marks card) ಉತ್ತೀರ್ಣರಾದ ದಿನಾಂಕವನ್ನು ಖಚಿತಪಡಿಸಿಕೊಂಡು ಪ್ರೋತ್ಸಾಹ ಧನ ಮಂಜೂರು ಮಾಡುವಂತೆ ಆದೇಶಿಸಿದೆ.

ಅದರಂತೆ ಹಣ ಸೆಳೆಯುವ ಅಧಿಕಾರಿಗಳು ತಮ್ಮ ವೈಯಕ್ತಿಕ ಗಮನ ಹರಿಸಿ ಈ ಮೇಲ್ಕಂಡಂತೆ ದಿನಾಂಕ:17.04.2021ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾದವರ ಅರ್ಹ ಸಿಬ್ಬಂದಿಗಳ ವಿವರಗಳನ್ನು ಇಲಾಖಾ ಜಾಲತಾಣದಲ್ಲಿನ ಗೂಗಲ್ ಫಾರಂನಲ್ಲಿ & MS EXCELನಲ್ಲಿ ಅರ್ಹ ಅಧಿಕಾರಿ/ನೌಕರರುಗಳ ಮಾಹಿತಿಯನ್ನು **ದಿನಾಂಕ:20.06.2023ರ ಒಳಗಾಗಿ** ದಾಖಲಿಸಿ ಹಾರ್ಡ್ ಕಾಪಿಯನ್ನು ಸಲ್ಲಿಸಲು ಸೂಚಿಸಿದೆ.

(ಸಾಫ್ಟ್ ಕಾಪಿಯನ್ನು ಇ ಮೇಲ್ ವಿಳಾಸ : **budgetdce2223@gmail.com** ಕ್ಕೆ ರವಾನಿಸುವುದು.)

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ನಿರ್ದೇಶಕರು.

**ಪ್ರಸ್ತಾವನೆಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:**

1. ಅರ್ಹ ಸೇವಾನಿರತ ಸರ್ಕಾರಿ ನೌಕರರ ಪರೀಕ್ಷಾ ಡಿಜಿಟಲ್ ಸಹಿ ಹೊಂದಿರುವ ಪ್ರಮಾಣ ಪತ್ರ ದೃಢೀಕೃತ ಪ್ರತಿ (CLT Validate Marks card)
2. ಈ ಪತ್ರಕ್ಕೆ ಅಡಕಗೊಳಿಸಿರುವ ಅನುಬಂಧದ ದೃಢೀಕೃತ ಪ್ರತಿ

| | | | | | | ANNEXURE-1 |
|---|---|---|---|---|---|---|
| Name and address of college / Office: | | | | | | |
| K2 DDO CODE | | | | | | |
| S.N | NAME OF EMPLOYEE | DATE OF APPOINTMENT | KGID NUMBER | CLT MARKS CARD NUMBER | CLT EXAM PASS MONTH AND YEAR | REMARKS |
| 1 | | | | | | |
| 2 | | | | | | |
| 3 | | | | | | |
| 4 | | | | | | |
| 5 | | | | | | |
| 6 | | | | | | |
| 7 | | | | | | |
| 8 | | | | | | |
| 9 | | | | | | |
| 10 | | | | | | |
| 11 | | | | | | |
| 12 | | | | | | |
| 13 | | | | | | |
| 14 | | | | | | |
| 15 | | | | | | |
| 16 | | | | | | |
| 17 | | | | | | |
| 18 | | | | | | |
| 19 | | | | | | |
| 20 | | | | | | |

**ಈ ಮೇಲ್ಕಂಡ ಕೋಷ್ಟಕದಲ್ಲಿರುವ ಎಲ್ಲಾ ಮಾಹಿತಿಯು ಪರೀಶಿಲಿಸಲಾಗಿದ್ದು, ಸರಿಯಾಗಿದೆ ಎಂದು ದೃಡೀಕರಿಸಲಾಗಿದೆ.**

**ಸ್ಥಳ :**

**ದಿನಾಂಕ:**

**ವ್ಯವಸ್ಥಾಪಕರು/ಅಧೀಕ್ಷಕರು/ಕಛೇರಿ ಸಿಬ್ಬಂದಿಯವರ ಸಹಿ** **ಪ್ರಾಂಶುಪಾಲರ ಸಹಿ**

| | | | | | | ANNEXURE-2 |
|---|---|---|---|---|---|---|
| JD Office Name and Adress: | | | | | | |
| K2 DDO CODE | | | | | | |
| S.N | NAME OF EMPLOYEE | DATE OF APPOINTMENT | KGID NUMBER | CLT MARKS CARD NUMBER | CLT EXAM PASS MONTH AND YEAR | REMARKS |
| 1 | | | | | | |
| 2 | | | | | | |
| 3 | | | | | | |
| 4 | | | | | | |
| 5 | | | | | | |
| 6 | | | | | | |
| 7 | | | | | | |
| 8 | | | | | | |
| 9 | | | | | | |
| 10 | | | | | | |
| 11 | | | | | | |
| 12 | | | | | | |
| 13 | | | | | | |
| 14 | | | | | | |
| 15 | | | | | | |
| 16 | | | | | | |
| 17 | | | | | | |
| 18 | | | | | | |
| 19 | | | | | | |
| 20 | | | | | | |

**ಈ ಮೇಲ್ಕಂಡ ಕೋಷ್ಟಕದಲ್ಲಿರುವ ಎಲ್ಲಾ ಮಾಹಿತಿಯು ಪರೀಶಿಲಿಸಲಾಗಿದ್ದು, ಸರಿಯಾಗಿದೆ ಎಂದು ದೃಡೀಕರಿಸಲಾಗಿದೆ.**

**ಸ್ಥಳ :**

**ದಿನಾಂಕ:**

**ವ್ಯವಸ್ಥಾಪಕರು/ಅಧೀಕ್ಷಕರು/ಕಛೇರಿ ಸಿಬ್ಬಂದಿಯವರ ಸಹಿ** **ಪ್ರಾದೇಶಿಕ ಜಂಟಿ ನಿರ್ದೇಶಕರ ಸಹಿ**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2008 ದಿನಾಂಕ: 07.03.2012.
2. ಸುತ್ತೋಲೆ ಸಂಖ್ಯೆ: ಸಿಆಸುಇ 95 ಸೇವನೆ 2016, ದಿನಾಂಕ: 23.01.2017.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 86 ಇಆಇ 2019 ದಿನಾಂಕ: 30.11.2019.
4. ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 86 ಇಆಇ 2019 ದಿನಾಂಕ: 12.12.2019.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 29 ಸೇವನೆ 2020 ದಿನಾಂಕ: 17.04.2021.

ಪ್ರಸ್ತಾವನೆ:-

ರಾಜ್ಯ ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಬಳಕೆಯ ಸಾಮಾನ್ಯ ಜ್ಞಾನವನ್ನು ಕಡ್ಡಾಯಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ನ್ನು ಮೇಲೆ ಓದಲಾದ (1)ರ ಅಧಿಸೂಚನೆಯನ್ವಯ ಜಾರಿಗೆ ತರಲಾಗಿದೆ. ಸದರಿ ನಿಯಮಗಳ ನಿಯಮ 3(3)ರಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಸೇವಾನಿರತ ನೌಕರರಿಗೆ ಅಂದರೆ, ಸದರಿ ನಿಯಮಗಳು ಜಾರಿಗೆ ಬಂದ ದಿನಾಂಕದಂದು ಸೇವೆಯಲ್ಲಿದ್ದ ನೌಕರರಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ, ಸರ್ಕಾರವು ಅಥವಾ ಸರ್ಕಾರದಿಂದ ಅನುಮೋದಿತ ಏಜೆನ್ಸಿಯು ನೀಡುವ ಪ್ರಮಾಣ ಪತ್ರವನ್ನು ಹಾಜರುಪಡಿಸುವುದಕ್ಕೆ ಒಳಪಟ್ಟು ರೂ.5,000/-ಗಳ ಪ್ರೋತ್ಸಾಹ ಧನವನ್ನು ಸಂದಾಯ ಮಾಡಲು ಆಸ್ಪದ ಕಲ್ಪಿಸಲಾಗಿದೆ.

ಮೇಲೆ ಓದಲಾದ (2)ರ ಸುತ್ತೋಲೆಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸರ್ಕಾರಿ ನೌಕರರಿಗೆ ಸರ್ಕಾರದಿಂದ ನೀಡಲ್ಪಡುವ ಪ್ರಮಾಣ ಪತ್ರದ ನಮೂನೆಯನ್ನು ಅಂತಿಮಗೊಳಿಸುವ ಹಾಗೂ ಸದರಿ ಪ್ರಮಾಣ ಪತ್ರವನ್ನು ಸರ್ಕಾರದ ಪರವಾಗಿ ನೀಡುವ ಏಜೆನ್ಸಿಯನ್ನು ಗುರುತಿಸುವ ವಿಷಯವು ಇನ್ನೂ ಪರಿಶೀಲನೆಯಲ್ಲಿದ್ದುದರಿಂದ, ಈ ವಿಷಯವು ಅಂತಿಮಗೊಳ್ಳುವವರೆಗೆ ರೂ.5,000/-ಗಳ ಪ್ರೋತ್ಸಾಹ ಧನವನ್ನು ಪಾವತಿ ಮಾಡುವ ಯಾವುದೇ ಪ್ರಸ್ತಾವನೆಯನ್ನು ಪರಿಶೀಲಿಸದಿರುವಂತೆ, ಮಂಜೂರು ಮಾಡದಿರುವಂತೆ ಹಾಗೂ ಡ್ರಾ ಮಾಡಿ ಪಾವತಿಸದಿರುವಂತೆ ಎಲ್ಲಾ ಇಲಾಖೆಗಳಿಗೆ ಸೂಚಿಸಲಾಗಿತ್ತು.

ಮೇಲೆ ಓದಲಾದ (3) ಮತ್ತು (4)ರ ಸರ್ಕಾರದ ಆದೇಶಗಳಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಯೋಜನಾ ನಿರ್ದೇಶಕರು (ಸಾಮರ್ಥ್ಯ ಸಂಘಟನೆ), ಇ-ಆಡಳಿತ ಕೇಂದ್ರ ಇವರಿಂದ ಡಿಜಿಟಲ್ ಸಹಿ ಮಾಡಲ್ಪಟ್ಟ ಪ್ರಮಾಣ ಪತ್ರವನ್ನು ವಿತರಿಸುವಂತೆ ಆದೇಶಿಸಲಾಗಿದೆ. ಅದರಂತೆ, ಈಗ ಯೋಜನಾ ನಿರ್ದೇಶಕರು (ಸಾಮರ್ಥ್ಯ ಸಂಘಟನೆ), ಇ-ಆಡಳಿತ ಕೇಂದ್ರ ಇವರ ಡಿಜಿಟಲ್ ಸಹಿ ಹೊಂದಿರುವ ಪ್ರಮಾಣ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

..2..

Scanned by CamScanner

ಮೇಲೆ ಓದಲಾದ (5)ರ ಅಧಿಸೂಚನೆಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನೌಕರರಿಗೆ ಪ್ರೋತ್ಸಾಹ ಧನ ನೀಡಲು ಅವಕಾಶ ಕಲ್ಪಿಸಲಾಗಿದ್ದ ನಿಯಮ 3 (3)ನ್ನು ಕೈಬಿಡಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷಾ ನಿಯಮಗಳು ಜಾರಿಗೆ ಬಂದ ದಿನಾಂಕ: 22.03.2012ರಂದು ಸೇವೆಯಲ್ಲಿದ್ದು, ದಿನಾಂಕ: 17.04.2021ರೊಳಗೆ ಉತ್ತೀರ್ಣರಾಗಿರುವ ಸರ್ಕಾರಿ ನೌಕರರು ಮಾತ್ರ ಪ್ರೋತ್ಸಾಹ ಧನ ಪಡೆಯಲು ಅರ್ಹರಾಗಿರುತ್ತಾರೆ. ಆದ್ದರಿಂದ, ಅರ್ಹ ಸೇವಾನಿರತ ಸರ್ಕಾರಿ ನೌಕರರಿಗೆ ಪ್ರೋತ್ಸಾಹ ಧನ ಮಂಜೂರು ಮಾಡುವ ಕುರಿತು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 99 ಸೇವನೆ 2022**

**ಬೆಂಗಳೂರು, ದಿನಾಂಕ: 24.01.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಜಾರಿಗೆ ಬಂದ ದಿನಾಂಕ: 22.03.2012 ರಂದು ಸೇವೆಯಲ್ಲಿದ್ದು, ದಿನಾಂಕ: 17.04.2021ರೊಳಗೆ ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅರ್ಹ ಸೇವಾನಿರತ ಸರ್ಕಾರಿ ನೌಕರರು ಹಾಜರುಪಡಿಸುವ ಡಿಜಿಟಲ್ ಸಹಿ ಹೊಂದಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷಾ ಪ್ರಮಾಣ ಪತ್ರವನ್ನು ಪರಿಶೀಲಿಸಿ ಉತ್ತೀರ್ಣರಾದ ದಿನಾಂಕವನ್ನು ಖಚಿತಪಡಿಸಿಕೊಂಡು ಪ್ರೋತ್ಸಾಹ ಧನ ಮಂಜೂರು ಮಾಡಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಸಕ್ಷಮ ಪ್ರಾಧಿಕಾರಗಳಿಗೆ ಈ ಮೂಲಕ ಆದೇಶಿಸಿದೆ.

ಸದರಿ ಪ್ರೋತ್ಸಾಹ ಧನವನ್ನು ಸರ್ಕಾರಿ ನೌಕರರು ವೇತನ ಪಡೆಯುವ ಲೆಕ್ಕಶೀರ್ಷಿಕೆಯಡಿಯ subsidiary expenses ಉಪಶೀರ್ಷಿಕೆಯಡಿಯಲ್ಲಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 471 ವೆಚ್ಚ-12 2022 ದಿನಾಂಕ : 19.12.2022 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

24-1-2023
(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.



Scanned by CamScanner

7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
22. ವಾರದ ರಾಜ್ಯ ಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)

Scanned by CamScanner